# ದೂರಶಿಕ್ಷಣ ನಿರ್ದೇಶನಾಲಯ

ಕನ್ನಡ ವಿಶ್ವವಿದ್ಯಾಲಯ, ಹಂಪಿ
ವಿದ್ಯಾರಣ್ಯ-583 276, ಹೊಸಪೇಟೆ ತಾಲ್ಲೂಕು, ಬಳ್ಳಾರಿ ಜಿಲ್ಲೆ

ಸಂಖ್ಯೆ:ಕವಿಹಂ:ದೂಶಿನಿ:17:ಪರೀಕ್ಷೆ:ಸೂಚನೆ:2019-20 ದಿನಾಂಕ 26.09.2019

## 2018-19ನೇ ಸಾಲಿನ ಪರೀಕ್ಷಾ ಸೂಚನಾ ಪತ್ರ

ಕನ್ನಡ ವಿಶ್ವವಿದ್ಯಾಲಯ, ಹಂಪಿ ದೂರಶಿಕ್ಷಣ ನಿರ್ದೇಶನಾಲಯದ ವಿವಿಧ ಸ್ನಾತಕೋತ್ತರ ಪದವಿ ಮತ್ತು ಡಿಪ್ಲೊಮ ಕೋರ್ಸ್‌ಗಳ ವಾರ್ಷಿಕ ಪರೀಕ್ಷೆಗಳು ದಿನಾಂಕ 02.11.2019 ರಿಂದ 06.11.2019ರವರೆಗೆ ನಡೆಯಲಿವೆ. ಪರೀಕ್ಷೆ ಬರೆಯುವ ವಿದ್ಯಾರ್ಥಿಗಳು ಈ ಕೆಳಗಿನ ಪರೀಕ್ಷಾ ಸೂಚನೆಗಳನ್ನು ಕಡ್ಡಾಯವಾಗಿ ಪಾಲಿಸಬೇಕು.

1. ಎಂ.ಎ. ಪ್ರಥಮ ವರ್ಷದ ಕನ್ನಡ, ಚರಿತ್ರೆ, ಸಮಾಜಶಾಸ್ತ್ರ, ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ (ಎಂ.ಜೆ.ಎಂ.ಸಿ.) ಮತ್ತು ಪುರಾತತ್ವ, ಸಂಸ್ಕೃತಿ ಮತ್ತು ಪ್ರವಾಸೋದ್ಯಮ ಡಿಪ್ಲೊಮ, ನಾಟಕ ಕಲೆ ಡಿಪ್ಲೊಮ, ಕನ್ನಡ ಸಾಹಿತ್ಯ ಡಿಪ್ಲೊಮ, ಕೋರ್ಸ್‌ಗಳ ವಾರ್ಷಿಕ ಪರೀಕ್ಷೆಗಳು ದಿನಾಂಕ 02.11.2019 ರಿಂದ 06.11.2019ರವರೆಗೆ ಬೆಳಿಗ್ಗೆ 10.30 ರಿಂದ 1.30ರ ವರೆಗೆ ಮತ್ತು ಎಂ.ಎ. ಅಂತಿಮ ವರ್ಷದ ಕನ್ನಡ, ಚರಿತ್ರೆ, ಸಮಾಜಶಾಸ್ತ್ರ, ಎಂ.ಜೆ.ಎಂ.ಸಿ. ಮತ್ತು ಪತ್ರಿಕೋದ್ಯಮ ಡಿಪ್ಲೊಮ, ಶಾಸನಶಾಸ್ತ್ರ ಡಿಪ್ಲೊಮ ಕೋರ್ಸ್ ಪರೀಕ್ಷೆಗಳು ಮಧ್ಯಾಹ್ನ 2.30 ರಿಂದ 5.30ರವರೆಗೆ ನಡೆಯುತ್ತವೆ.
2. ಕನ್ನಡ ವಿಶ್ವವಿದ್ಯಾಲಯದ ವಿದ್ಯಾರಣ್ಯ ಕೇಂದ್ರದಲ್ಲಿ ನೋಂದಣಿ ಪಡೆದಿರುವ ವಿದ್ಯಾರ್ಥಿಗಳು ದಿನಾಂಕ 15.10.2019 ರಿಂದ ದೂರಶಿಕ್ಷಣ ನಿರ್ದೇಶನಾಲಯದಲ್ಲಿ ಪ್ರವೇಶಪತ್ರಗಳನ್ನು ಪಡೆದುಕೊಳ್ಳಬಹುದು.
3. ಅಧ್ಯಯನ ಕೇಂದ್ರಗಳಲ್ಲಿ ಪ್ರವೇಶ ಪಡೆದಿರುವ ವಿದ್ಯಾರ್ಥಿಗಳು ಆಯಾ ಅಧ್ಯಯನ ಕೇಂದ್ರಗಳಲ್ಲಿ ದಿನಾಂಕ 10.10.2019 ರಿಂದ ಪ್ರವೇಶ ಪತ್ರಗಳನ್ನು ಪಡೆದುಕೊಳ್ಳಬಹುದು.
4. ಪ್ರವೇಶ ಪತ್ರಗಳನ್ನು ಪಡೆಯುವಾಗ ವಿದ್ಯಾರ್ಥಿಗಳು ಗುರುತಿನ ಚೀಟಿಯನ್ನು ತರುವುದು ಕಡ್ಡಾಯ.
5. ಪರೀಕ್ಷೆ ಬರೆಯುವ ವಿದ್ಯಾರ್ಥಿಗಳು ಪರೀಕ್ಷೆಗಳು ಮುಗಿಯುವವರೆಗೆ ಪ್ರವೇಶ ಪತ್ರದ ಜೊತೆಗೆ ಗುರುತಿನ ಚೀಟಿಯನ್ನು ಇಟ್ಟುಕೊಳ್ಳುವುದು ಮತ್ತು ಪರಿಶೀಲಕರು ಪರಿಶೀಲನೆಗೆ ಬಂದಾಗ ಪ್ರವೇಶ ಪತ್ರದ ಜೊತೆಗೆ ಗುರುತಿನ ಚೀಟಿಯನ್ನು ತೋರಿಸಬೇಕು.
6. ಯಾವುದೇ ಪುಸ್ತಕ ಅಥವಾ ಅದರ ಪುಟಗಳನ್ನು, ನೋಟ್‌ಬುಕ್ಕನ್ನು, ಕಚ್ಚಾ ಅಥವಾ ಕೈಬರಹದ ಹಾಳೆಗಳನ್ನು, ಇತರ ನಿರ್ಬಂಧಿತ ಸಾಮಗ್ರಿಗಳನ್ನು ಪರೀಕ್ಷಾ ಕೊಠಡಿಯಲ್ಲಿ ತರುವುದು ನಿಷಿದ್ಧ. ಅಂಥ ಯಾವುದೇ ವಸ್ತುಗಳನ್ನು ಪರೀಕ್ಷಾ ಸಮಯದಲ್ಲಿ ಇಟ್ಟುಕೊಳ್ಳಬಾರದು.
7. ಬರವಣಿಗೆಯ ಯಾವುದೇ ಸಾಮಗ್ರಿಗಳನ್ನು ಪರಸ್ಪರ ವರ್ಗಾಯಿಸಿಕೊಳ್ಳಬಾರದು.
8. ಪರೀಕ್ಷಾ ವೇಳೆಯಲ್ಲಿ ಬೇರೆ ಪರೀಕ್ಷಾರ್ಥಿಯೊಂದಿಗೆ ಮಾತನಾಡುವುದು ಅಥವಾ ಬೇರಾವುದೇ ವಿಧದಲ್ಲಿ ಸಂಪರ್ಕಿಸಬಾರದು.
9. ಬರೆದ ಅಥವಾ ಖಾಲಿ ಉತ್ತರ ಪತ್ರಿಕೆಗಳನ್ನು ಪರೀಕ್ಷಾ ಕೊಠಡಿಯಿಂದ ಹೊರಡುವಾಗ ಪರೀಕ್ಷಾರ್ಥಿಯು ಜೊತೆಗೆ ತೆಗೆದುಕೊಂಡು ಹೋಗಬಾರದು.
10. ಬೇರೆಯವರಿಂದ ಸಹಾಯ ಪಡೆಯುವುದು, ಸಹಾಯ ಮಾಡುವುದು ಅಥವಾ ಮಾಡಲು ಪ್ರಯತ್ನಿಸುವುದು. ಪುಸ್ತಕ, ಹಸ್ತಪ್ರತಿ, ಟಿಪ್ಪಣಿ ಇತ್ಯಾದಿಗಳ ಮೂಲಕ ನಕಲು ಮಾಡಬಾರದು ಅಥವಾ ನಕಲು ಮಾಡಲು ಪ್ರಯತ್ನಿಸಬಾರದು, ಬೇರೆಯವರಿಗೆ ತಮ್ಮ ಉತ್ತರ ಪತ್ರಿಕೆಯನ್ನು ನಕಲು ಮಾಡಲು ಅವಕಾಶ ಕೊಡಬಾರದು.
11. ಪರೀಕ್ಷೆಯಲ್ಲಿ ಯಾವುದೇ ಪರೀಕ್ಷಾರ್ಥಿಗೆ ಅನುಕೂಲವಾಗಬಹುದಾದ ಸಂಜ್ಞೆ, ಸೂಚನೆಗಳನ್ನು ಕಾಗದದ ಮೇಲೆ ಇಲ್ಲವೇ ಇನ್ನಿತರ ಯಾವುದೇ ವಸ್ತುಗಳ ಮೇಲೆ ಬರೆಯಬಾರದು.
12. ಹೊರಗೆ ಬರೆದು ಸಿದ್ಧಪಡಿಸಿದ ಉತ್ತರ ಪತ್ರಿಕೆಯನ್ನು ಕಳ್ಳತನದಿಂದ ಪರೀಕ್ಷಾ ಕೊಠಡಿಯಲ್ಲಿ ಸಾಗಿಸುವಂಥ ಹಾಗೂ ಪರೀಕ್ಷಾ ಕೋಣೆಯಲ್ಲಿ ಒದಗಿಸದಿದ್ದ ಕಾಗದಗಳನ್ನಾಗಲೀ, ಬದಲಿ ಉತ್ತರ ಪತ್ರಿಕೆಗಳನ್ನಾಗಲೀ ಮೂಲ ಉತ್ತರ ಪತ್ರಿಕೆಯೊಂದಿಗೆ ಲಗತ್ತಿಸುವಂಥ ಅಥವಾ ಲಗತ್ತಿಸಲು ಪ್ರಯತ್ನಿಸುವಂಥ ಅಸಮಂಜಸ ಮಾರ್ಗ ಅನುಸರಿಸಬಾರದು.
13. ತನ್ನ ಹೆಸರಿನಲ್ಲಿ ಬೇರೆಯವರನ್ನು ಪರೀಕ್ಷೆಗೆ ಕೂಡಿಸುವುದು ಅಥವಾ ತಾನು ಬೇರೆಯವರ ಹೆಸರಿನಲ್ಲಿ ಕೂಡಬಾರದು.
14. ಪರೀಕ್ಷಾ ಕೊಠಡಿಯಲ್ಲಿಯ ಮೇಲ್ವಿಚಾರಕರನ್ನು, ಪರೀಕ್ಷಾ ಸಿಬ್ಬಂದಿಯವರನ್ನು, ನಾಲ್ಕನೇ ದರ್ಜೆ ನೌಕರರನ್ನು ಅಥವಾ ವಿಶ್ವವಿದ್ಯಾಲಯದ ಮತ್ತು ಕಾಲೇಜುಗಳ ಅಧಿಕಾರಿ ವರ್ಗದವರನ್ನು ಪರೀಕ್ಷೆಯಲ್ಲಿ ಅಕ್ರಮ ಸೌಲಭ್ಯಕ್ಕಾಗಿ ವಿನಂತಿಸಬಾರದು, ಮನವಿ ಮಾಡಬಾರದು, ಬೆದರಿಕೆ ಹಾಕುವುದು ಅಥವಾ ಆಸೆ ತೋರಿಸಬಾರದು.
15. ವಿದ್ಯಾರ್ಥಿಯು ಈ ಮೇಲಿನ ಯಾವುದೇ ನಿಯಮಗಳನ್ನು ಉಲ್ಲಂಘಿಸಿದಲ್ಲಿ ಇದನ್ನು ಅಪರಾಧವೆಂದು ಪರಿಗಣಿಸಲಾಗುವುದು.
16. ಯಾವುದೇ ಕಾನೂನು ವಿವಾದಗಳು ಬಳ್ಳಾರಿ ಜಿಲ್ಲೆಯ ಹೊಸಪೇಟೆ ನಗರದ ನ್ಯಾಯಾಲಯದ ವ್ಯಾಪ್ತಿಗೆ ಮಾತ್ರ ಒಳಪಡುತ್ತವೆ.
17. ಪರೀಕ್ಷೆ ಬರೆಯುವ ವಿದ್ಯಾರ್ಥಿಗಳು ತಮ್ಮ ಊಟ ಮತ್ತು ವಸತಿಯನ್ನು ತಾವೇ ವ್ಯವಸ್ಥೆ ಮಾಡಿಕೊಳ್ಳಬೇಕು.

18. ಪರೀಕ್ಷೆ ನಡೆಯುವ ದಿನಗಳು ಮತ್ತು ಕೋರ್ಸ್‌ಗಳ ವಿವರಗಳು

| ದಿನಾಂಕ | ಸಮಯ | ಕೋರ್ಸ್‌ಗಳು |
|---|---|---|
| 02.11.2019 ರಿಂದ 06.11.2019 | 10.30 ರಿಂದ 1.30 ವರೆಗೆ | ಕನ್ನಡ ಎಂ.ಎ. ಪ್ರಥಮ ವರ್ಷ<br>ಚರಿತ್ರೆ ಎಂ.ಎ. ಪ್ರಥಮ ವರ್ಷ<br>ಸಮಾಜಶಾಸ್ತ್ರ ಎಂ.ಎ. ಪ್ರಥಮ ವರ್ಷ<br>ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ (ಎಂ.ಜೆ.ಎಂ.ಸಿ.) ಪ್ರಥಮ ವರ್ಷ<br><br>ಪುರಾತತ್ವ, ಸಂಸ್ಕೃತಿ ಮತ್ತು ಪ್ರವಾಸೋದ್ಯಮ ಡಿಪ್ಲೊಮ<br>ನಾಟಕ ಕಲೆ ಡಿಪ್ಲೊಮ<br>ಕನ್ನಡ ಸಾಹಿತ್ಯ ಡಿಪ್ಲೊಮ |
| 02.11.2019 ರಿಂದ 06.11.2019 | 2.30 ರಿಂದ 5.30 ವರೆಗೆ | ಕನ್ನಡ ಎಂ.ಎ. ಅಂತಿಮ ವರ್ಷ<br>ಚರಿತ್ರೆ ಎಂ.ಎ. ಅಂತಿಮ ವರ್ಷ<br>ಸಮಾಜಶಾಸ್ತ್ರ ಎಂ.ಎ. ಅಂತಿಮ ವರ್ಷ<br>ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ (ಎಂ.ಜೆ.ಎಂ.ಸಿ.) ಅಂತಿಮ ವರ್ಷ<br><br>ಪತ್ರಿಕೋದ್ಯಮ ಅಧ್ಯಯನ ಡಿಪ್ಲೊಮ<br>ಶಾಸನಶಾಸ್ತ್ರ ಡಿಪ್ಲೊಮ |

19. ವಿದ್ಯಾರ್ಥಿಯು ಹೆಚ್ಚಿನ ಮಾಹಿತಿಗಳನ್ನು ಅಧ್ಯಯನ ಕೇಂದ್ರಗಳು ಅಥವಾ ದೂರಶಿಕ್ಷಣ ನಿರ್ದೇಶನಾಲಯದ ನಿರ್ದೇಶಕರ ಮೊ. 9481220945 ವಿಶ್ವವಿದ್ಯಾಲಯದ ವೆಬ್‌ಸೈಟ್ www.kannadauniversity.orgನ್ನು ಸಂಪರ್ಕಿಸಬಹುದು.

ನಿರ್ದೇಶಕರು
ದೂರಶಿಕ್ಷಣ ನಿರ್ದೇಶನಾಲಯ